# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 08.06.2011**

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಶಾಲಾ ಕಾಲೇಜುಗಳಲ್ಲಿ ವ್ಯಾಸಂಗ ಮಾಡುವ ವಿದ್ಯಾರ್ಥಿಗಳಿಗೆ ಪ್ರಥಮ ಬಾರಿಗೆ ಜೂನ್ ತಿಂಗಳ ಮೊದಲನೇ ವಾರದಲ್ಲಿ ಪಠ್ಯಪುಸ್ತಕ ಮತ್ತು ನೋಟ್ ಪುಸ್ತಕಗಳನ್ನು ಉಪ ಮಹಾಪೌರರು ವಿತರಿಸಿದರು.

ಈ ಸಂದರ್ಭದಲ್ಲಿ ಉಪ ಮಹಾಪೌರರಾದ ಶ್ರೀ ಎಸ್. ಹರೀಶ್ ರವರು ಮಾತನಾಡಿ, ಪ್ರತಿವರ್ಷ ಪಾಲಿಕೆಯ ವಿದ್ಯಾರ್ಥಿಗಳಿಗೆ ಪಠ್ಯಪುಸ್ತಕ ವಿತರಣೆ ಮಾಡುವಾಗ ಸ್ವಲ್ಪ ವಿಳಂಬವಾಗುತ್ತಿತ್ತು. ಇದರಿಂದ ವಿದ್ಯಾರ್ಥಿಗಳಿಗೆ ವಿದ್ಯಾಭ್ಯಾಸದಲ್ಲಿ ತೊಂದರೆಯಾಗುತ್ತಿತ್ತು. ಇದನ್ನು ಅರಿತು ಈ ವರ್ಷ ಪುಸ್ತಕಗಳನ್ನು ಖರೀದಿಸುವ ಪ್ರಕ್ರಿಯೆಯನ್ನು ಬೇಗನೆ ಪೂರ್ಣಗೊಳಿಸಿ, ಜೂನ್ ತಿಂಗಳ ಮೊದಲನೇ ವಾರದಲ್ಲಿ ವಿತರಣೆ ಮಾಡಲಾಗಿದೆ. ಇದರಿಂದ ಮಕ್ಕಳ ವಿದ್ಯಾಭ್ಯಾಸಕ್ಕೆ ಅನುಕೂಲವಾಗಲಿದೆ ಎಂದು ತಿಳಿಸಿದರು.

ಇದೇ ಪ್ರಥಮ ಬಾರಿಗೆ ಶ್ರೀರಾಮಪುರದ ಶಾಲೆ ಮತ್ತು ಭಾರತೀಯ ವಿದ್ಯಾಭವನದ ಜಾಯಿಂಟ್ ವೆಂಚರ್‌ನಲ್ಲಿ ಸಿ.ಬಿ.ಎಸ್.ಸಿ. ಶಾಲೆಯನ್ನು ಆರಂಭ ಮಾಡಲಾಗಿದೆ ಹಾಗೂ 5 ಪದವಿ ಪೂರ್ವ ಕಾಲೇಜುಗಳಲ್ಲಿ ಪ್ರವೇಶ ಮುಗಿದಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಆಡಳಿತ ಪಕ್ಷದ ನಾಯಕರಾದ ಶ್ರೀ ಬಿ.ಆರ್. ನಂಜುಂಡಪ್ಪ, ಶಿಕ್ಷಣ ಮತ್ತು ಕ್ರೀಡಾ ಸ್ಥಾಯಿ ಸಮಿತಿಯ ಅಧ್ಯಕ್ಷರಾದ ಶ್ರೀ ರಮೇಶ್ ರಾಜು. ಕೆ. ಹಾಗೂ ಶಿಕ್ಷಣ ಮತ್ತು ಕ್ರೀಡಾ ಸ್ಥಾಯಿ ಸಮಿತಿ ಸದಸ್ಯರು ಭಾಗವಹಿಸಿದ್ದರು.

**ಸಾರ್ವಜನಿಕ ಸಂಪರ್ಕಾಧಿಕಾರಿ**

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 08.06.2011**

ಇತ್ತೀಚೆಗೆ ನಗರದ ಬಹುಮಹಡಿ ಕಟ್ಟಡಗಳಲ್ಲಿ ನಡೆದ ಬೆಂಕಿ ಅನಾಹುತಗಳ ಘಟನೆಯ ಹಿನ್ನೆಲೆಯಲ್ಲಿ ಕರ್ನಾಟಕ ಘನ ಉಚ್ಚ ನ್ಯಾಯಾಲಯದಲ್ಲಿ ಸಾರ್ವಜನಿಕ ಹಿತಾಸಕ್ತಿ ಅರ್ಜಿ ದಾಖಲಾಗಿದ್ದು, ಈ ಹಿನ್ನೆಲೆಯಲ್ಲಿ ಘನ ಉಚ್ಚ ನ್ಯಾಯಾಲಯವು ನೀಡಿದ ನಿರ್ದೇಶನದ ಮೇರೆಗೆ ಬಿ.ಬಿ.ಎಂ.ಪಿ. ಹಾಗೂ ಕರ್ನಾಟಕ ಅಗ್ನಿಶಾಮಕ ದಳ ಜಂಟಿಯಾಗಿ ನಗರದಲ್ಲಿರುವ ಎಲ್ಲಾ ಬಹುಮಹಡಿ ಕಟ್ಟಡಗಳನ್ನು ಸಮಗ್ರವಾಗಿ ಪರಿಶೀಲಿಸಿ, ಅಗ್ನಿ ಸುರಕ್ಷತೆ ಕ್ರಮವನ್ನು ಅಳವಡಿಸಿರುವ ಬಗ್ಗೆ ತನಿಖೆ ಮಾಡಲು ಇಂದು ಪಾಲಿಕೆ ಆಯುಕ್ತರು ನಗರ ಯೋಜನೆ, ಅಗ್ನಿಶಾಮಕ ದಳ ಮತ್ತು ವಲಯ ಮುಖ್ಯ ಅಭಿಯಂತರರುಗಳ ಸಭೆಯನ್ನು ಕರೆದು ಸುದೀರ್ಘವಾಗಿ ಚರ್ಚೆ ನಡೆಸಿ, ಈ ಕೆಳಕಂಡ ತೀರ್ಮಾನಗಳನ್ನು ಕೈಗೊಳ್ಳಲಾಯಿತು.

1. ಈ ಕೂಡಲೇ ಎಲ್ಲಾ ಬಹುಮಹಡಿ ಕಟ್ಟಡಗಳನ್ನು ಪರಿಶೀಲನೆ ಮಾಡುವುದರ ಬಗ್ಗೆ ಕ್ರಿಯಾ ಯೋಜನೆ ಸಿದ್ಧಪಡಿಸಿ, ಘನ ಉಚ್ಚ ನ್ಯಾಯಾಲಯಕ್ಕೆ ಪ್ರಮಾಣ ಪತ್ರವನ್ನು ಸಲ್ಲಿಸುವುದು.
2. ಅಗ್ನಿಶಾಮಕ ದಳದ ಅಧಿಕಾರಿಗಳು, ನಗರ ಯೋಜನೆಯ ಅಭಿಯಂತರರುಗಳು ಮತ್ತು ವಲಯ ಮುಖ್ಯ ಅಭಿಯಂತರರನ್ನೊಳಗೊಂಡಂತಹ 6 ತಂಡಗಳನ್ನು ರಚಿಸಿ, ಈ ತಂಡಗಳು ಕೂಡಲೇ ಬಹುಮಹಡಿ ಕಟ್ಟಡಗಳ ತಪಾಸಣೆ ಪ್ರಾರಂಭಿಸುವುದು.
3. ಈ ತಂಡಗಳು 3 ದಿನದಲ್ಲಿ ಕನಿಷ್ಠ 100 ಬಹುಮಹಡಿ ಕಟ್ಟಡಗಳ ತಪಾಸಣೆ ನಡೆಸಿ, ಅವುಗಳಲ್ಲಿ ಸುರಕ್ಷತೆಗಾಗಿ ಅಳವಡಿಸಲಾದ ಕ್ರಮಗಳ ಬಗ್ಗೆ ವರದಿಯನ್ನು ಸಲ್ಲಿಸುವುದು.

ಸದರಿ ತಂಡಗಳು ಬಹುಮಹಡಿ ಕಟ್ಟಡಗಳ ತಪಾಸಣೆ ಪ್ರಾರಂಭ ಮಾಡಲಿದ್ದು, ತಪಾಸಣೆ ಸಂದರ್ಭದಲ್ಲಿ ಕಟ್ಟಡದ ಮಾಲೀಕರು / ವಾರಸುದಾರರು ಅಧಿಕಾರಿಗಳೊಂದಿಗೆ ಸಹಕರಿಸಿ, ಅಗತ್ಯ ಮಾಹಿತಿಗಳನ್ನು / ದಾಖಲೆಗಳನ್ನು ಮತ್ತು ಅಗ್ನಿ ಸುರಕ್ಷತೆಗೆ ಅಳವಡಿಸಲಾದ ಕ್ರಮಗಳ ಬಗ್ಗೆ ಸಂಪೂರ್ಣ ಮಾಹಿತಿಯನ್ನು ನೀಡಬೇಕೆಂದು ಪಾಲಿಕೆ ಆಯುಕ್ತರು ಸಾರ್ವಜನಿಕರಲ್ಲಿ ಮನವಿ ಮಾಡಿದರು.

**ಸಾರ್ವಜನಿಕ ಸಂಪರ್ಕಾಧಿಕಾರಿ**